





ದಿನಾಂಕ:14-08-2023 ರಂದು ಮೈಸೂರಿನ ಸುತ್ತೂರು ಶ್ರೀಗಳು ಸಭಾಪತಿ ಬಸವರಾಜ್ ಹೊರಟ್ಟಿ ಅವರನ್ನ ಗೌರವಿಸಿ ಆಶೀರ್ವದಿಸಿದರು. ಕರ್ನಾಟಕ ವಿಧಾನಪರಿಷತ್ತಿಗೆ ಸತತ ಎಂಟು ಬಾರಿ ಆಯ್ಕೆಯಾಗುವ ಮೂಲಕ ಐತಿಹಾಸಿಕ ದಾಖಲೆ ನಿರ್ಮಿಸಿ ಪರಿಷತ್ತಿನಲ್ಲಿ ಸತತ 43 ವರ್ಷಗಳ ಕಾಲ ಅವಿರತ ಸಾರ್ಥಕ ಸೇವೆ ಸಲ್ಲಿಸಿದ ಮತ್ತು ಹಲವು ಬಾರಿ ಸಚಿವರಾಗಿ ಮೂರನೇ ಬಾರಿ ಸಭಾಪತಿಯಾಗಿ ಸೇವೆ ಸಲ್ಲಿಸುತ್ತಿರುವ  ಶ್ರೀ ಬಸವರಾಜ್ ಹೊರಟ್ಟಿ ಅವರನ್ನು ತಮಿಳುನಾಡಿನ ನೀಲಗಿರಿ ಜಿಲ್ಲೆಯ ಸುಪ್ರಸಿದ್ಧ ಪ್ರವಾಸಿ ತಾಣವಾದ ''ಊಟಿ''ಯಲ್ಲಿ ಬಸವರಾಜ್ ಹೊರಟ್ಟಿ ಅಭಿಮಾನಿ ಬಳಗದವರು ಹಾಗೂ ಕೊತಗಿರಿ ಲಿಂಗಾಯತ ಸಂಘದವರು ಏರ್ಪಡಿಸಿದ ಅಭಿನಂದನಾ ಸಮಾರಂಭದ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಗಮಿಸಿದ್ದ ಹೊರಟ್ಟಿ ಅವರನ್ನು ಮೈಸೂರಿನ ಸುತ್ತೂರ್ ಮಹಾ ಸಂಸ್ಥಾನ ಮಠದ ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿ ಕೇಂದ್ರ ಮಹಾಸ್ವಾಮಿಗಳು ಪ್ರೀತಿಯಿಂದ ಬರಮಾಡಿಕೊಂಡು ಗೌರವಿಸಿ ಆಶೀರ್ವದಿಸಿದರು.